ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

ಸಂಖ್ಯೆ: ಎಡಿಎಂ–2/ಗ.ರಾ.ದಿ:ಶಾಲೆ:2020–21 ದಿನಾಂಕ–21–01–2021

**–: ಸುತ್ತೋಲೆ :–**

ವಿಷಯ: ಜನವರಿ 26, 2021 ರಂದು ರಾಜ್ಯಾದ್ಯಂತ ಎಲ್ಲಾ ಶಾಲೆಗಳಲ್ಲಿ ಗಣರಾಜ್ಯೋತ್ಸವ ದಿನಾಚರಣೆಯನ್ನು ಆಚರಿಸುವ ಬಗ್ಗೆ.

ಪ್ರತಿ ವರ್ಷ ಜನವರಿ 26 ರಂದು ರಾಜ್ಯಾದ್ಯಂತ ಎಲ್ಲಾ ಶಾಲೆಗಳಲ್ಲಿ ರಾಷ್ಟ್ರೀಯ ಹಬ್ಬವಾಗಿ ಗಣರಾಜ್ಯೋತ್ಸವ ದಿನಾಚರಣೆಯನ್ನು ಆಚರಿಸಲಾಗುತ್ತಿದ್ದು, ಇದು ಅತ್ಯಂತ ಪ್ರಾಮುಖ್ಯದ ದಿನವಾಗಿರುತ್ತದೆ. ಕರೋನಾ ಮಹಾಮಾರಿ ಹಿನ್ನಲೆಯಲ್ಲಿ ಈ ಬಾರಿ ರಾಜ್ಯಾದ್ಯಂತ ಎಲ್ಲಾ ಶಾಲೆಗಳಲ್ಲಿ ಮುಖ್ಯ ಶಿಕ್ಷಕರು, ಸಹ ಶಿಕ್ಷಕರುಗಳು, ಆಯಾ ಶಾಲೆಗಳ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ಅಧ್ಯಕ್ಷರು ಹಾಗು ಸದಸ್ಯರುಗಳು ಭಾಗವಹಿಸಿ ಕೋವಿಡ್–19 ರ ಪ್ರಾಮಾಣಿಕ ಕಾರ್ಯಚರಣಾ ವಿಧಾನವನ್ನು (ಎಸ್.ಒ.ಪಿ) ಪಾಲಿಸಿ, ಸಾಮಾಜಿಕ ಅಂತರವನ್ನು ಕಾಯ್ದುಕೊಂಡು ಗಣರಾಜ್ಯೋತ್ಸವ ದಿನಾಚರಣೆಯನ್ನು ಅತ್ಯಂತ ಸರಳವಾಗಿ ಶಿಷ್ಠಾಚಾರದೊಂದಿಗೆ ಕಡ್ಡಾಯವಾಗಿ ಆಚರಿಸಲು ಸೂಚಿಸಿದೆ.

10ನೇ ತರಗತಿ ಮತ್ತು ವಿದ್ಯಾಗಮ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುತ್ತಿರುವ ವಿದ್ಯಾರ್ಥಿಗಳಲ್ಲಿ, ಆಸಕ್ತ ವಿದ್ಯಾರ್ಥಿಗಳು ತಮ್ಮ ಪೋಷಕರ ಸಹಮತಿಯೊಂದಿಗೆ ಗಣರಾಜ್ಯೋತ್ಸವದ ದಿನಾಚರಣೆಯ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವುದು.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ,

1. ಅಪರ ಆಯುಕ್ತರು ಧಾರವಾಡ & ಗುಲ್ಬರ್ಗಾ, ಇವರುಗಳಿಗೆ ಕಳುಹಿಸುತ್ತಾ ತಮ್ಮ ವ್ಯಾಪ್ತಿಯ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳು ಅಗತ್ಯ ಕ್ರಮ ವಹಿಸುವಂತೆ ಸೂಚಿಸುವುದು.
2. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಾ.ಶಿ.ಇ ಇವರಿಗೆ (ಜಿಲ್ಲಾ ಉಪನಿರ್ದೇಶಕರುಗಳ ಮುಖಾಂತರ)
3. ರಾಜ್ಯದ ಎಲ್ಲಾ ಶಾಲಾ ಮುಖ್ಯ ಶಿಕ್ಷಕರುಗಳಿಗೆ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ) ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು ಗೌರವಪೂರ್ವಕವಾಗಿ:**

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ ಸದರಿ ವಿಷಯವನ್ನು ಮಾನ್ಯ ಸಚಿವರ ಅವಗಾಹನೆಗೆ ತರುವಂತೆ ಕೋರಿದೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಬೆಂಗಳೂರು.